# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 950
ಸದಸ್ಯರ ಹೆಸರು : ಶ್ರೀ ಕೆ. ಹರೀಶ್ ಕುಮಾರ್
(ವಿಧಾನಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ : 13.12.2023
ಉತ್ತರಿಸುವ ಸಚಿವರು : ಕಂದಾಯ ಸಚಿವರು

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| (ಅ) | ಕಳೆದ 25 ವರ್ಷಗಳಿಂದ ದಕ್ಷಿಣ ಕನ್ನಡ ಜಿಲ್ಲೆಯ ವ್ಯಾಪ್ತಿಯಲ್ಲಿ ಅತೀ ಹಿಂದುಳಿದ ವರ್ಗಗಳ ನೋಂದಾಯಿತ ಸಂಘ ಸಂಸ್ಥೆಗಳ ವಿಸ್ತರಿತ ಕಾರ್ಯಚಟುವಟಿಕೆಗಳಿಗೆ ಜಾಗದ ಕೊರತೆ ಇರುವುದರಿಂದ ಸರ್ಕಾರಿ ಜಾಗದ ಮಂಜೂರಾತಿಗೆ ಅರ್ಜಿ ಸಲ್ಲಿಸಿದ್ದಾಗಿಯೂ, ಕಂದಾಯ ಇಲಾಖೆಯ ಅಧಿಕಾರಿಗಳು ಸರ್ಕಾರಿ ಭೂ ಮಂಜೂರಾತಿ ನಿಯಮಾವಳಿ 1969ರ ಪ್ರಕಾರ ಸರ್ಕಾರಿ ಜಮೀನು ಖಾಸಗಿ ಸಂಘ ಸಂಸ್ಥೆಗಳಿಗೆ ನೀಡಲು ಬರುವುದಿಲ್ಲ ಎಂದು ತಿರಸ್ಕರಿಸಿದ್ದು, ಇದು ಕಾನೂನಿನ ತೊಡಕಿನಿಂದಾಗಿ ಅತೀ ಹಿಂದುಳಿದ ವರ್ಗಗಳ ಸಮಾಜಮುಖಿ ಕಾರ್ಯಗಳಿಗೆ ತೊಡಕುಂಟಾಗಿರುವ ವಿಷಯವು ಸರ್ಕಾರದ ಗಮನಕ್ಕೆ ಬಂದಿದೆಯೇ; | ದಕ್ಷಿಣ ಕನ್ನಡ ಜಿಲ್ಲೆಯೂ ಒಳಗೊಂಡಂತೆ ರಾಜ್ಯದ ಯಾವುದೇ ಪ್ರದೇಶದಲ್ಲಿನ ಗೋಮಾಳ ಮತ್ತು ಖರಾಬು ಜಮೀನುಗಳು ಸೇರಿದಂತೆ ಸರ್ಕಾರಿ ಜಮೀನುಗಳನ್ನು ಕರ್ನಾಟಕ ಭೂ ಮಂಜೂರಾತಿ ನಿಯಮಗಳು, 1969 ರ ನಿಯಮ 22(ಎ)(2) ರಂತೆ ನಗರ ಪೌರಮಿತಿಯೊಳಗೆ ಯಾವುದೇ ವ್ಯಕ್ತಿಗೆ ಅಥವಾ ಖಾಸಗಿ ಸಂಘ-ಸಂಸ್ಥೆಗಳಿಗೆ ಮಂಜೂರು ಮಾಡಲು ಅವಕಾಶವಿರುವುದಿಲ್ಲ. ನಗರ ಪೌರಮಿತಿಯೊಳಗಿನ ಸರ್ಕಾರಿ ಜಮೀನುಗಳನ್ನು ಸಾರ್ವಜನಿಕ ಉದ್ದೇಶಕ್ಕಾಗಿ ಕಾಯ್ದಿರಿಸಬೇಕಾಗುತ್ತದೆ. ಆದಾಗ್ಯೂ, ಅನಿವಾರ್ಯ ಪ್ರಕರಣಗಳಲ್ಲಿ ಜಿಲ್ಲಾಧಿಕಾರಿ/ಪ್ರಾದೇಶಿಕ ಆಯುಕ್ತರ ಶಿಫಾರಸ್ಸು ಅಥವಾ ಸ್ವತಃ ಸರ್ಕಾರವೇ ಸದರಿ ನಿಯಮಗಳ ಯಾವುದೇ ಉಪಬಂಧಗಳನ್ನು ಸಡಿಲಗೊಳಿಸುವುದು ನ್ಯಾಯವೆಂದು ಮತ್ತು ಯುಕ್ತವೆಂದು ಕಂಡುಬಂದಲ್ಲಿ ಕರ್ನಾಟಕ ಭೂ ಮಂಜೂರಾತಿ ನಿಯಮಗಳು, 1969 ರ ನಿಯಮ 27 ರಂತೆ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಸಚಿವ ಸಂಪುಟದ ಅನುಮೋದನೆಯೊಂದಿಗೆ ನಿಯಮಗಳನ್ನು ಸಡಿಲಿಸಿ ಅಂತಹ ಜಮೀನುಗಳನ್ನು ಮಂಜೂರು ಮಾಡಲು ಅವಕಾಶ ಕಲ್ಪಿಸಲಾಗಿದೆ. |
| (ಆ) | ಬಂದಿದ್ದಲ್ಲಿ, ಈ ಕುರಿತಂತೆ ಸದರಿ ಭೂ ಮಂಜೂರಾತಿ ನಿಯಮಗಳಿಗೆ ತಿದ್ದುಪಡಿ ತಂದು ಅತೀ ಹಿಂದುಳಿದ ವರ್ಗಗಳಿಗೆ ನ್ಯಾಯ ಒದಗಿಸುವ ನಿಟ್ಟಿನಲ್ಲಿ ಸರ್ಕಾರವು ಕ್ರಮವಹಿಸುವುದೇ? | |

(ಕಡತ ಸಂಖ್ಯೆ:ಕಂಇ 106 ಎಲ್‌ಜಿಎ 2023)

**(ಕೃಷ್ಣ ಬೈರೇಗೌಡ)**
ಕಂದಾಯ ಸಚಿವರು